ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

673 (695) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಪ್ರವಾಸಿತಾಣಗಳ ವಿವರ ನೀಡುವುದು ;

(ಇ) 2020-21ನೇ ಸಾಲಿನಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಪ್ರವಾಸಿತಾಣಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ವಿವರ ನೀಡುವುದು ;

(ಈ) ಶಿವಮೊಗ್ಗ ಜಿಲ್ಲೆಯ ಜೋಗ ಜಲಪಾತ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)